ಬಿ.ಎಸ್. ಯಡಿಯೂರಪ್ಪ

ಮುಖ್ಯ ಮಂತ್ರಿ

ವಿಧಾನ ಸೌಧ
ಬೆಂಗಳೂರು - 560 001

23/03/2020
ದಿನಾಂಕ ........................

## ಸಹೃದಯ ಸಾರ್ವಜನಿಕ ಬಂಧುಗಳಲ್ಲಿ ಮನವಿ

ಕೋವಿಡ್-19 ಎಂಬ ವೈರಾಣು ವಿಶ್ವದೆಲ್ಲೆಡೆ ಹರಡುತ್ತಿರುವ ಸಾಂಕ್ರಾಮಿಕ ರೋಗದಿಂದ ಗಣನೀಯ ಪ್ರಮಾಣದಲ್ಲಿ ಜನರು ಸಾವಿಗೀಡಾಗುತ್ತಿದ್ದು, ಈ ಸಾಂಕ್ರಾಮಿಕ ರೋಗವು ಕರ್ನಾಟಕ ರಾಜ್ಯದಲ್ಲೂ ಕಂಡುಬಂದಿರುತ್ತದೆ. ಈ ರೋಗವನ್ನು ತಡೆಗಟ್ಟಲು ಸರ್ಕಾರವು ಯುದ್ಧೋಪಾದಿಯಲ್ಲಿ ಕ್ರಮ ಕೈಗೊಳ್ಳುತ್ತಿದ್ದು, ಈ ವೈರಾಣು ಹರಡುವುದನ್ನು ನಿಯಂತ್ರಿಸಲು ಮಹತ್ವದ ನಿರ್ಧಾರಗಳನ್ನು ಕೈಗೊಂಡಿರುತ್ತದೆ. ಸದರಿ ರೋಗದಿಂದ ಬಳಲುತ್ತಿರುವ ಸಾರ್ವಜನಿಕರಿಗೆ ವೈದ್ಯೋಪಚಾರಗಳನ್ನು ಸರ್ಕಾರದ ವತಿಯಿಂದ ಮಾಡಿಸಲಾಗುತ್ತಿದ್ದು, ರೋಗವನ್ನು ಪತ್ತೆ ಹಚ್ಚಲು ಹೆಚ್ಚಿನ ಪ್ರಯೋಗಾಲಯಗಳನ್ನು ಸ್ಥಾಪಿಸಲಾಗಿರುತ್ತದೆ. ಈ ಎಲ್ಲಾ ಸರ್ಕಾರದ ಕಾರ್ಯತಂತ್ರಗಳನ್ನು ಮನಗಂಡು ಈ ವೈರಾಣು ಹರಡುವುದನ್ನು ತಡೆಗಟ್ಟಲು ತಾವು ಸರ್ಕಾರದೊಂದಿಗೆ ಕೈಜೋಡಿಸಬೇಕೆಂದು ಹಾಗೂ ಕಾಲಕಾಲಕ್ಕೆ ಸರ್ಕಾರದ ವತಿಯಿಂದ ನೀಡಲಾಗುವ ಸೂಚನೆಗಳನ್ನು ಪಾಲಿಸಬೇಕೆಂದು ವಿನಂತಿಸಿದೆ. ಈ ಕಾರ್ಯಕ್ಕಾಗಿ ದೇಣಿಗೆ ಸಲ್ಲಿಸಲು ಇಚ್ಛಿಸುವ ದಾನಿಗಳು ಈ ಕೆಳಕಂಡ ಅಧಿಕೃತ ಬ್ಯಾಂಕ್ ಖಾತೆಗೆ ದೇಣಿಗೆಯನ್ನು ಸಲ್ಲಿಸಬಹುದಾಗಿದೆ. ಸದರಿ ಖಾತೆಗೆ ಧನಾದೇಶ / ಬೇಡಿಕೆ ಹುಂಡಿ / ವಿದ್ಯುನ್ಮಾನದ ಮೂಲಕವು ದೇಣಿಗೆಯನ್ನು ಸಲ್ಲಿಸಬಹುದಾಗಿರುತ್ತದೆ.

| | | |
|---|---|---|
| ಖಾತೆಯ ಹೆಸರು | : | **Chief Minister Relief Fund Covid-19** |
| ಬ್ಯಾಂಕ್ ಹೆಸರು | : | **S.B.I. (State Bank of India)** |
| ಶಾಖೆ | : | **Vidhana Soudha Branch** |
| ಖಾತೆ ಸಂಖ್ಯೆ | : | 39234923151 |
| ಐ.ಎಫ್.ಎಸ್.ಸಿ ಕೋಡ್ | : | SBIN0040277 |
| ಎಂ.ಐ.ಸಿ.ಆರ್ ಸಂಖ್ಯೆ | : | 560002419 |
| ಚೆಕ್ / ಡಿಡಿ ಕಳುಹಿಸಬೇಕಾದ ವಿಳಾಸ | : | ನಂ.235–ಎ, 2ನೇ ಮಹಡಿ,<br>ಮುಖ್ಯಮಂತ್ರಿಗಳ ಪರಿಹಾರ ನಿಧಿ ಶಾಖೆ,<br>ವಿಧಾನಸೌಧ, ಬೆಂಗಳೂರು–560 001. |

ಈ ರೀತಿ ಸಲ್ಲಿಸುವ ದೇಣಿಗೆಗೆ, ಆದಾಯ ತೆರಿಗೆ ಕಾಯ್ದೆ 80 G (2)ರಡಿ ತೆರಿಗೆ ವಿನಾಯಿತಿ ಇದೆ. ಆದಾಯ ತೆರಿಗೆ ವಿನಾಯಿತಿ ಪಡೆಯಲು **PAN NO. AAAGC1692P** ಅಥವಾ **GGGGG 0000G** ಅನ್ನು ಬಳಸಬಹುದಾಗಿದೆ.

ಬಿ.ಎಸ್. ಯಡಿಯೂರಪ್ಪ

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ